2005–06 ರಿಂದ 2008–09 ರವರೆಗೆ ಕರ್ನಾಟಕ ರಾಜ್ಯದಲ್ಲಿ ಅಕ್ಕಿಯ ಉತ್ಪಾದನೆ ವಿವರಗಳು ಈ ಕೆಳಕಂಡಂತಿರುತ್ತವೆ. (ಕೃಷಿ ಇಲಾಖೆಯ ವರದಿಯಂತೆ).

ಕ್ರಮ ಸಂಖ್ಯೆ	ವರ್ಷ	ವಿಸ್ತೀರ್ಣ (ಲಕ್ಷ ಹೆಕ್ಟೇರ್‌ಗಳಲ್ಲಿ)	ಉತ್ಪಾದನೆ (ಲಕ್ಷ ಟನ್‌ಗಳಲ್ಲಿ)	ಇಳುವರಿ (ಒಂದು ಹೆಕ್ಟೇರ್‌ಗೆ ಕೆ.ಜಿ.ಯಂತೆ)
1	2005–06	14.85	39.99	2834
2	2006–07	13.95	34.46	2600

4) ರಾಜ್ಯಾದ್ಯಂತ ಲೆವಿ ಅಕ್ಕಿಯನ್ನು ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಸಾಮಾನ್ಯ ಶ್ರೇಣಿಯ ಭತ್ತ ಪ್ರತಿ ಕ್ವಿಂಟಾಲ್‌ಗೆ ರೂ.900/– ರಂತೆ ಹಾಗೂ ಎ ಶ್ರೇಣಿಯ ಭತ್ತಕ್ಕೆ ರೂ.930/– ರಂತೆ ಸಂಗ್ರಹಿಸಲು ಸಂಗ್ರಹಣಾ ಕೇಂದ್ರಗಳನ್ನು ತೆರೆಯಲಾಗಿದ್ದು ದಿನಾಂಕ:20–2–2009 ರವರೆಗೆ 85000 ಮೆ.ಟನ್.ಗಳ ಅಕ್ಕಿಯನ್ನು ಲೆವಿ ರೂಪದಲ್ಲಿ ಸಂಗ್ರಹಿಸಲಾಗಿದೆ.

5) ಅಕ್ಕಿಯ ಅಂತರ್‌ರಾಜ್ಯ ಸಾಗಾಣಿಕೆಯನ್ನು ನಿರ್ಬಂಧಿಸಲಾಗಿದೆ.

<u>ಅಕ್ಕಿಯ ಬೆಲೆಯ ಹೆಚ್ಚಳಕ್ಕೆ ಪ್ರಮುಖ ಕಾರಣಗಳು:–</u>

(I) ಅಕ್ಕಿ ಉತ್ಪಾದನೆಯಲ್ಲಿ ಇಳಿಮುಖ.

(II) ಆರ್ಥಿಕ ಹಿಂಜರಿತ.

ಆನಾಸ. 44 ಡಿಆರ್.ಎ 2009.

(ಹೆಚ್. ಹಾಲಪ್ಪ)
ಆಹಾರ ನಾಗರಿಕ ಸರಬರಾಜು ಮತ್ತು
ಗ್ರಾಹಕರ ವ್ಯವಹಾರಗಳ ಸಚಿವರು.

<u>ಕರ್ನಾಟಕ ವಿಧಾನ ಸಭೆ</u>

390 ಶ್ರೀ ಆರ್.ಧ್ರುವನಾರಾಯಣ

ಅ) ಸಹಕಾರ ಇಲಾಖೆಯ ನಿಬಂಧನೆಗಳಿಗೊಳಪಟ್ಟು ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಹಕಾರ ಸಂಘಗಳ ಸಂಖ್ಯೆ ಎಷ್ಟು?

ರಾಜ್ಯದಲ್ಲಿ 28,645 ಸಹಕಾರ ಸಂಘಗಳು ಕಾರ್ಯನಿರ್ವಹಿಸುತ್ತಿವೆ.

ಆ) ಈ ಸಹಕಾರ ಸಂಘಗಳ ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಹುದ್ದೆಗಳಲ್ಲಿ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ ಹಿಂದುಳಿದ ವರ್ಗಗಳು ಹಾಗೂ ಮಹಿಳೆಯರಿಗೆ ಮೀಸಲಾತಿ ಸೌಲಭ್ಯವನ್ನು ಕಲ್ಪಿಸಲಾಗಿದೆಯೇ?

ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959ರ ಪ್ರಕರಣ 28ಎ(3) ಪ್ರಕಾರ ಆಡಳಿತ ಮಂಡಳಿಯಲ್ಲಿ ಒಂದು ಸ್ಥಾನವನ್ನು ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗಕ್ಕೆ

ಒಂದು ಸ್ಥಾನವನ್ನು ಮಹಿಳೆಯರಿಗೆ ಮೀಸಲಿಡಲಾಗಿದೆ. ಆದರೆ ಆಡಳಿತ ಮಂಡಳಿಯಲ್ಲಿ ಅಧ್ಯಕ್ಷರ ಸ್ಥಾನಕ್ಕೆ ಅಥವಾ ಉಪಾಧ್ಯಕ್ಷರ ಸ್ಥಾನಕ್ಕೆ ಮೀಸಲಾತಿ ಇರುವುದಿಲ್ಲ

ಇ) ಜಿಲ್ಲಾ ಪಂಚಾಯತಿ, ತಾಲ್ಲೂಕು ಪಂಚಾಯಿತಿ ಮತ್ತು ಗ್ರಾಮ ಪಂಚಾಯಿತಿಗಳಲ್ಲಿ ಸದರಿ ವರ್ಗಗಳಿಗೆ ಮೀಸಲಾತಿ ಕಲ್ಪಿಸಿ ಅವರನ್ನು ಸಬಲೀಕರಣಗೊಳಿಸಿರುವಂತೆ ಸಹಕಾರ ಸಂಘಗಳಲ್ಲೂ ಸದರಿ ವರ್ಗಗಳಿಗೆ ಮೀಸಲಾತಿ ಕಲ್ಪಿಸಿಕೊಡುವಲ್ಲಿ ಸರ್ಕಾರ ಕೈಗೊಂಡ ಕ್ರಮವೇನು? (ವಿವರ ನೀಡುವುದು)

ಈ ಅಂಶದ ಬಗ್ಗೆ ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959ಕ್ಕೆ ಸೂಕ್ತವೆಂದು ಕಂಡುಬಂದ ತಿದ್ದುಪಡಿಗಳನ್ನು ಸಲಹೆ ಮಾಡಲು ಶ್ರೀ ವಿಶ್ವನಾಥನ್ ಅವರ ಅಧ್ಯಕ್ಷತೆಯಲ್ಲಿ ದಿನಾಂಕ: 27.05.2005ರಲ್ಲಿ ತ್ರಿಸದಸ್ಯ ಸಮಿತಿಯನ್ನು ರಚಿಸಿತ್ತು. ಸದರಿ ಸಮಿತಿಯು ಈ ಬಗ್ಗೆ ಈಗಾಗಲೇ ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿದ್ದು ವರದಿಯಲ್ಲಿ ತಾಲ್ಲೂಕು ಪಂಚಾಯಿತಿ, ಜಿಲ್ಲಾ ಪಂಚಾಯಿತಿಗಳಲ್ಲಿ ಇರುವಂತೆ ಸಹಕಾರ ಕ್ಷೇತ್ರದಲ್ಲಿ ಮೀಸಲಾತಿಯನ್ನು ನೀಡುವ ಅಗತ್ಯ ಕಂಡುಬರುವುದಿಲ್ಲವೆಂದು ಅಭಿಪ್ರಾಯ ನೀಡಿರುತ್ತದೆ.

ಸಂಸದೀಯ ವ್ಯವಹಾರ ಮತ್ತು ಶಾಸನ ರಚನಾ ಇಲಾಖೆಯ ಟಿಪ್ಪಣಿ ಸಂಖ್ಯೆ:ಡಿಪಿಎಎಲ್ 329 ಡಿ 1.2003 ದಿನಾಂಕ 07.06.2003ರಡಿ ಸಂವಿಧಾನದ ಪರಿಚ್ಛೇದ 12ರನ್ವಯ ಒಂದು ಸಹಕಾರ ಸಂಘವನ್ನು " **state** " ಎಂದು ಪರಿಗಣಿಸಲು ಬರುವುದಿಲ್ಲವೆಂದು, ಪರಂತು ಪಟ್ಟಣ ಪ್ರದೇಶದ ಸ್ಥಳೀಯ ಸಂಸ್ಥೆಗಳು ಮತ್ತು ಪಂಚಾಯತ್‌ಗಳು ಸಂವಿಧಾನದ ಪರಿಚ್ಛೇದ 12ರನ್ವಯ **"state"** ಎಂದು ಪರಿಗಣಿಸಲ್ಪಡುತ್ತವೆಂದು ತಿಳಿಸಲಾಗಿದೆ. ಪಂಚಾಯತ್ ರಾಜ್ ಸಂಸ್ಥೆಗಳು ಸ್ಥಳೀಯ ಸ್ವಯಂ ಸರ್ಕಾರ(local self government) ಆಗಿದ್ದು ರಾಜ್ಯ ಸರ್ಕಾರದಿಂದಲೇ ಪೂರ್ಣ ಧನಸಹಾಯ ಪಡೆಯುತ್ತವೆ. ಆದರೆ ಸಹಕಾರ ಸಂಸ್ಥೆಗಳು ಷೇರುಧನ ಪಾವತಿಸಿ ಸದಸ್ಯತ್ವ ಪಡೆಯುವ ಸದಸ್ಯರಿಗೆ ಮಾತ್ರ ಸೀಮಿತವಾಗಿದ್ದು ಅವುಗಳು ತಮ್ಮ ಬಂಡವಾಳವನ್ನು ರೂಢಿಸಿಕೊಳ್ಳುತ್ತವೆ. ಆದ್ದರಿಂದ, ಸಹಕಾರ ಸಂಸ್ಥೆಗಳನ್ನು ಪಂಚಾಯತ್ ರಾಜ್ ಸಂಸ್ಥೆಗಳಿಗೆ ಹೋಲಿಸುವುದು ಸಮಂಜಸವಲ್ಲ, ಆದರೆ ಇದರ ಬಗ್ಗೆ ಪರಿಶೀಲಿಸಲಾಗುವುದು.

ಸಂಖ್ಯೆ: ಸಿಒ 38 ಸಿಎಲ್‌ಎಂ 2009

ಸಹಿ/-
(ಲಕ್ಷ್ಮಣ ಸ. ಸವದಿ)
ಸಹಕಾರ ಸಚಿವರು

(ಆರ್.ಎಸ್.ಹುಚ್ಚಾಚಾರಿ)
ವಿಶೇಷ ಕರ್ತವ್ಯಾಧಿಕಾರಿ ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಸಹಕಾರ ಇಲಾಖೆ.